O.S. 367/2013 DW-2

ದಿನಾಂಕಃ 13.08.2026 ರಂದು ಸಾಕ್ಷಿಗೆ ಪ್ರಮಾಣ ವಚನ ಭೋಧಿಸಲಾಯಿತು.

**ಮುಂದುವರೆದ ಪಾಟೀ ಸವಾಲುಃ ವಾದಿ ಪರ ವಕೀಲರಿಂದಃ**

OS NO. 368/2013 ರಲ್ಲಿ ನಾನು ಸಹ ಪಕ್ಷಕಾರ ಎಂದರೆ ಸರಿ. ನನ್ನ ಪ್ರತಿವಾದ ಪತ್ರದಲ್ಲಿ ಈ ಬಗ್ಗೆ ತಿಳಿಸಿಲ್ಲ ಎಂದರೆ ಸರಿಯಲ್ಲ. ವಾದಿಗಳ ಜನ್ಮ ದಿನಾಂಕದ ಬಗ್ಗೆ ದಾಖಲೆಗಳನ್ನು ಹಾಜರು ಪಡಿಸಿಲ್ಲ. ದಾವ ಸ್ವತ್ತಿನ ಐಟಂ ನಂಬರ್ 2 ರ ಪಹಣೆಗಳನ್ನು ಹಾಜರು ಪಡಿಸಿಲ್ಲ ಎಂದರೆ ಸರಿಯಲ್ಲ. ಐಟಂ ನಂಬರ್ 2 ರ ಕ್ರಯ ಪತ್ರವನ್ನು 4 ನೇ ಪ್ರತಿವಾದಿಗೆ ಬರೆದುಕೊಡುವಾಗ ವಾದಿಗಳು ಮೈನರ್ ಎಂದು ನಮೂದಿಸಲಾಗಿದೆ ಎಂದರೆ ಸರಿಯಲ್ಲ. ಸದರಿ ಕ್ರಯ ಪತ್ರ ನಮ್ಮ ಅಣ್ಣ ಚೆನ್ನ ಬಸವಯ್ಯ ಬಳಿ ಇದೆ ಎಂದರೆ ಸರಿಯಲ್ಲ. ದಾವಾ ಐಟಂ ನಬರ್ ಮಾರಾಟ ಮಾಡಿರುವುದರಿಂದ ನನಗೆ ಮತ್ತು ನನ್ನ ಮಕ್ಕಳಿಗೆ ಯಾವುದೇ ಹಕ್ಕು ಇಲ್ಲ ಎಂದರೆ ಸರಿಯಲ್ಲ. 4 ನೇಪ್ರತಿವಾದಿಗಳಿಗೆ ತೊಂದರೆ ನೀಡಲು ಸುಳ್ಳು ದಾಖಲೆಗಳನ್ನು ಸೃಷ್ಟಿಸಿ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಕಂಪ್ಯೂಟರೀಕರಣಗೊಳಿಸಿ ಪ್ರಿಂಟ್ ತೆಗೆಯಲಾಯಿತು.)

ಓ.ಹೇ.ಕೇ.ಸರಿ.ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ.,
ಶಿರಾ.